# ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

## ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆ) ಇವರ ನಿಯಮ 72ರ ಗಮನ ಸೆಳೆಯುವ ಸೂಚನೆಗೆ ಹೇಳಿಕೆ

**ಸೂಚನೆ:**

ಉಡುಪಿ, ದಕ್ಷಿಣ ಕನ್ನಡ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಈಗಾಗಲೇ ಪ್ರಾರಂಭಿಸಿರುವ ಸೇನಾ ಆಯ್ಕೆ ಪೂರ್ವ ತರಬೇತಿ ಶಾಲೆಗಳನ್ನು ರಾಜ್ಯದ ಎಲ್ಲಾ ಜಿಲ್ಲೆಗಳಿಗೆ ವಿಸ್ತರಿಸಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಯುನಿಫಾರ್ಮ್ ಸೇವೆಗಳಿಗೆ ಸೇರ್ಪಡೆಯಾಗಲು ಅನುಕೂಲ ಮಾಡಿಕೊಡುವ ಕುರಿತು ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

**ಹೇಳಿಕೆ:**

ಸರ್ಕಾರದ ಆದೇಶ ಸಂಖ್ಯೆ: ಹಿಂವಕ 393 ಬಿಎಂಎಸ್ 2022, ದಿನಾಂಕ:20.06.2022 ಹಾಗೂ ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಹಿಂವಕ 393 ಬಿಎಂಎಸ್ 2022, ದಿನಾಂಕ:11.07.2022 ರನ್ವಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಭಾರತೀಯ ಸೇನೆ / ಇತರೆ ಯೂನಿಫಾರ್ಮ್ ಸೇವೆಗಳಿಗೆ ಸೇರ ಬಯಸುವ ರಾಜ್ಯದ ಹಿಂದುಳಿದ ವರ್ಗಗಳ ಜಾತಿಗೆ ಸೇರಿದ ಅರ್ಹ ಅಭ್ಯರ್ಥಿಗಳಿಗೆ ಆಯ್ಕೆಯ ಪೂರ್ವ ಸಿದ್ಧತೆ ಬಗ್ಗೆ ವೃತ್ತಿ ಮಾರ್ಗದರ್ಶನ ಹಾಗೂ ತರಬೇತಿಯನ್ನು ಊಟ ಮತ್ತು ವಸತಿಯೊಂದಿಗೆ ನೀಡಲು ದಕ್ಷಿಣ ಕನ್ನಡ ಜಿಲ್ಲೆ, ಉಡುಪಿ ಜಿಲ್ಲೆ ಹಾಗೂ ಉತ್ತರ ಕನ್ನಡ ಜಿಲ್ಲೆಗಳಲ್ಲಿ ಸೇನಾ ತರಬೇತಿ ಶಾಲೆಗಳನ್ನು ಪ್ರಾರಂಭಿಸಲು ಅನುಮೋದನೆ ನೀಡಿ ಆದೇಶಿಸಲಾಗಿದ್ದು, ಅದರಂತೆ ಭಾರತೀಯ ಸೇನೆಯಲ್ಲಿ ಆಯ್ಕೆಯಾಗಲು ಬಯಸುವ ರಾಜ್ಯದ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ಆಯ್ಕೆ ಪೂರ್ವ ತರಬೇತಿ ನೀಡಲು ಉಡುಪಿ, ದಕ್ಷಿಣ ಕನ್ನಡ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಈಗಾಗಲೇ ಸೈನಿಕ ತರಬೇತಿ ಶಾಲೆಗಳನ್ನು ಸ್ಥಾಪಿಸಿ ಅನುಷ್ಠಾನಗೊಳಿಸಲಾಗಿರುತ್ತದೆ.

ಮುಂದುವರೆದು, ರಾಜ್ಯದ ಇತರೆ ಜಿಲ್ಲೆಗಳಿಗೂ ಈ ಸೈನಿಕ ಶಾಲೆಗಳನ್ನು ವಿಸ್ತರಿಸುವ ಸಂಬಂಧ ಪ್ರಸಕ್ತ ಸಾಲಿನಲ್ಲಿ ಸದರಿ ತರಬೇತಿಗೆ ಒದಗಿಸುವ ಅನುದಾನವನ್ನಾಧರಿಸಿ ಭಾರತೀಯ ಸೇನೆ/ಇತರೆ ಯೂನಿಫಾರ್ಮ್ ಸೇವೆಗಳಿಗೆ ಸೇರ ಬಯಸುವ ಅರ್ಹ ಅಭ್ಯರ್ಥಿಗಳಿಗೆ ಉಚಿತವಾಗಿ ಆಯ್ಕೆಯ ಪೂರ್ವ ಸಿದ್ಧತೆ ಬಗ್ಗೆ ವೃತ್ತಿ ಮಾರ್ಗದರ್ಶನ ಹಾಗೂ ತರಬೇತಿ ನೀಡಲು ಸೇನಾ ಆಯ್ಕೆ ಪೂರ್ವ ತರಬೇತಿ ಶಾಲೆಗಳನ್ನು ಎಲ್ಲಾ ಜಿಲ್ಲೆಗಳಲ್ಲೂ ಪ್ರಾರಂಭಿಸುವ ಬಗ್ಗೆ ಪರಿಶೀಲಿಸಲಾಗುವುದು.

**ಸಂಖ್ಯೆ:ಹಿಂವಕ 333 ಬಿಎಂಎಸ್ 2023**

**(ಶಿವರಾಜ. ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು.